## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಡಾ. ಕೆ.ವಿ.ದೇವರಾಜುಲು ಮತ್ತು ಶ್ರೀ ರಾಮರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ, ಇವರುಗಳ ವಿರುದ್ಧದ ಶಿಸ್ತು ಕ್ರಮ – ಅಂತಿಮ ಆದೇಶ.

**ಓದಲಾಗಿದೆ:-** 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂಖ್ಯೆ:ಆಡಳಿತ(1)ಸಿಸಿಎ-1/2010-11 ದಿ 27.06.2011.
2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 106 ವಿಸೇಬಿ 2010 ದಿ 14.05.2015.
3) ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

------

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ-(1)ರಲ್ಲಿ ಓದಲಾದ ದಿನಾಂಕ 27-06-2011 ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಬೆಂಗಳೂರು ಪೂರ್ವ ತಾಲ್ಲೂಕು ದೊಡ್ಡಗುಬ್ಬಿ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಶ್ರೀ ರಾಮರೆಡ್ಡಿ ಮತ್ತು ಡಾ. ಕೆ.ವಿ.ದೇವರಾಜುಲು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರೀಶೀಲಿಸಿ, ಶ್ರೀ ರಾಮರೆಡ್ಡಿ ಮತ್ತು ಡಾ. ಕೆ.ವಿ.ದೇವರಾಜುಲು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ ಇವರುಗಳು ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆ ಎನ್ನಲಾದ ಈ ಕೆಳಕಂಡ ಕರ್ತವ್ಯಲೋಪ/ದುರ್ನಡತೆ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 12(1)(ಎ)ರಡಿಯಲ್ಲಿ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 14-05-2015 ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

> ಬೆಂಗಳೂರು ಪೂರ್ವ, ತಾಲ್ಲೂಕು ಪಂಚಾಯತಿ, ದೊಡ್ಡಗುಬ್ಬಿ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಸೆಪ್ಟೆಂಬರ್ 2009ರ ನಂತರ ತೆಗೆದುಕೊಂಡು ಅನುಷ್ಠಾನಗೊಳಿಸಿರುವ ಕಾಮಗಾರಿಗಳಿಗೆ ಎಂಐಎಸ್ ನಿಂದ ಮುದ್ರಿಸಿದ ಎನ್‌ಎಂಆರ್ ಗಳನ್ನು ನಿರ್ವಹಿಸಿದ್ದು, ಹೀಗೆ ಉಪಯೋಗಿಸಲ್ಪಟ್ಟ ಎಲ್ಲಾ ಎನ್‌ಎಂಆರ್‌ಗಳಲ್ಲಿ ಮುದ್ರಿಸಿದ ದಿನಾಂಕಕ್ಕಿಂತ ಮುಂಚಿತವಾಗಿ ಕೆಲಸ ಮಾಡಿರುವುದಾಗಿ ದಾಖಲಿಸಲಾಗಿದೆ.
>
> ದೊಡ್ಡಗುಬ್ಬಿ ಗ್ರಾಮದ ಸ್ಮಶಾನದಲ್ಲಿ ನೆಡುತೋಪು ನಿರ್ಮಾಣ ಮತ್ತು ರಾಂಪುರ ಗ್ರಾಮದ ಸ್ಮಶಾನದಲ್ಲಿ ಗಿಡ ನೆಡುವುದು ಈ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವುದಕ್ಕಾಗಿ ರೂ. 38,614/-

ಗಳನ್ನು ಪಾವತಿಸಲಾಗಿದೆ. ನಿಯಮಾನುಸಾರ ಕಾಮಗಾರಿಗಳ ವಾಸ್ತವ ಛಾಯಾಚಿತ್ರಗಳ ಬದಲಾಗಿ ತಂತ್ರಜ್ಞಾನದ ಸಹಾಯದಿಂದ ಕೃತಕವಾಗಿ ಸೃಷ್ಟಿಸಿದ ಕಂಪ್ಯೂಟರ್ ಗ್ರಾಫಿಕ್ಸ್‌ಗಳನ್ನು ದಾಖಲೆಗಳಾಗಿ ಸೃಷ್ಟಿಸಿರುತ್ತಾರೆ ಹಾಗೂ ಯೋಜನೆಯಡಿ ಕಾಮಗಾರಿಗಳನ್ನು ಪ್ರಾರಂಭಿಸುವುದಕ್ಕೆ ಮೊದಲು ಕಾರ್ಯಕ್ರಮ ಅಧಿಕಾರಿಯಿಂದ ಕಾಮಗಾರಿ ಪ್ರಾರಂಭದ ಆದೇಶ ಅಥವಾ ಅನುಮತಿ ಪತ್ರವನ್ನು ಪಡೆದಿರುವುದಿಲ್ಲ.

ಸದರಿ ಯೋಜನೆಗೆ ಸಂಬಂಧಿಸಿದ ಎಲ್ಲಾ ಸಾಮಗ್ರಿಗಳ ಸರಬರಾಜು ಮೊತ್ತವನ್ನು ಶ್ರೀ ಆನಂದಕುಮಾರ್ ಎಂಬ ಗುತ್ತಿಗೆದಾರರಿಗೆ ಪಾವತಿಸಿದ್ದು, ಯಾವುದೇ ಓಚರ್‌ಗಳು ಲಭ್ಯವಿರುವುದಿಲ್ಲ. ಈ ಲೋಪಗಳಿಂದ ಯೋಜನೆಯ ಕಾರ್ಯಕ್ರಮ ಅಧಿಕಾರಿಯಾಗಿ ಮೇಲುಸ್ತುವಾರಿಯನ್ನು ಮಾಡುವಲ್ಲಿ ಸಂಪೂರ್ಣ ವಿಫಲರಾಗಿ ಕರ್ತವ್ಯಲೋಪವೆಸಗಿರುತ್ತಾರೆ.

ಕಾಮಗಾರಿ ಅಂದಾಜು ಪಟ್ಟಿಯ ಕೇವಲ ಜೆರಾಕ್ಸ್ ಪ್ರತಿಯ ಆಧಾರದ ಮೇಲೆ ಹಣ ಪಾವತಿಸಲಾಗಿದ್ದು, ಯೋಜನೆ ನಿಯಮಾವಳಿಗನುಸಾರವಾಗಿ ಅನುಮೋದಿತ ಹಾಗೂ ಮೂಲ ಅಂದಾಜು ಪಟ್ಟಿಯನ್ನು ಕಡತದಲ್ಲಿ ನಿರ್ವಹಿಸಿರುವುದಿಲ್ಲ. ಯೋಜನೆಯ ಕಾರ್ಯಕ್ರಮ ಅಧಿಕಾರಿಯಾಗಿ ಇಂತಹ ಲೋಪಗಳನ್ನು ತಡೆಗಟ್ಟುವಲ್ಲಿ ವಿಫಲರಾಗಿ ಮೇಲುಸ್ತುವಾರಿಯನ್ನು ಸರಿಯಾಗಿ ನಿರ್ವಹಿಸದೆ ಕರ್ತವ್ಯಲೋಪವೆಸಗಿರುತ್ತಾರೆ.

ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀ ಜಿ.ಆರ್.ಶ್ರೀರಾಮರೆಡ್ಡಿ ಇವರು ದಿ 20-06-2015ರ ಪತ್ರದಲ್ಲಿ ಲಿಖಿತ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸಿದ್ದು, ಸದರಿ ಪ್ರಕರಣವು 2009ನೇ ಸಾಲಿಗೆ ಸೇರಿದ್ದಾಗಿರುತ್ತದೆ. ನರೇಗಾ ಯೋಜನೆಯನ್ನು ಅನುಷ್ಠಾನಗೊಳಿಸಲು ಎಂ.ಐ.ಎಸ್.ನಿಂದ ಮುದ್ರಿಸಿದ ಎನ್.ಎಂ.ಆರ್.ಗಳಂತೆ ಕಾರ್ಯನಿರ್ವಹಿಸಲಾಗಿದೆ. ಮತ್ತು ದೊಡ್ಡಗುಬ್ಬಿ ಗ್ರಾಮ ಪಂಚಾಯತಿಯಲ್ಲಿ ನರೇಗಾ ಯೋಜನೆಯನ್ನು ದೊಡ್ಡಗಬ್ಬಿ ಮತ್ತು ರಾಮಪುರ ಸ್ಮಶಾನದಲ್ಲಿ ನೆಡುತೋಪು ಕಾರ್ಯಕ್ರಮಗಳನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸಿರುವುದಾಗಿ ಹಾಗೂ ಕಾಮಗಾರಿಗಳಿಗೆ ನಿಗಧಿಪಡಿಸಿದ ಮೊತ್ತ ರೂ.38,614/-ಗಳನ್ನು ಕೂಲಿಕಾರರಿಗೆ ಕೂಲಿಗಾಗಿ ಪಾವತಿಸಿಲಾಗಿದೆ ಎಂದು, ಶ್ರೀಮತಿ ಲೇಖದರ್ಶಿನಿ, ವನಪಾಲಕಿ, ಅರಣ್ಯ ಇಲಾಖೆ ಇವರು ದಿನಾಂಕ 26.08.2010ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಂಗಳೂರು ನಗರ ಜಿಲ್ಲೆ, ಇವರಿಗೆ ಸಲ್ಲಿಸಿರುವ ಹೇಳಿಕೆಯಲ್ಲಿ ತಿಳಿಸಿರುತ್ತಾರೆ.

ಕೂಲಿಗಾರರು ನಿರ್ವಹಿಸಿದ ಕೆಲಸ ಪ್ರಮಾಣಕ್ಕನುಗುಣವಾಗಿ ಕೂಲಿಗಾರರ ಖಾತೆಗೆ ಪಂಚಾಯತಿಯಿಂದ ನೇರವಾಗಿ ಜಮಾ ಆಗಿರುತ್ತದೆ. ಈ ಬಗ್ಗೆ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ನಗರ ಸಾಮಾಜಿಕ ಅರಣ್ಯ ಬೆಂಗಳೂರು, ಇವರು ದಿನಾಂಕ 31.08.2010ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ಇವರಿಗೆ ಸಲ್ಲಿಸಿರುವ ವರದಿಯನ್ನು ಒಪ್ಪಿ, ಆರೋಪವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ.

ದೊಡ್ಡಗುಬ್ಬಿ ಗ್ರಾಮ ಪಂಚಾಯತಿಯಲ್ಲಿ ನರೇಗಾ ಯೋಜನೆಯಡಿ ಕಾಮಗಾರಿಗಳಿಗೆ ಜಿಲ್ಲಾ ಪಂಚಾಯತ್ ಇಂಜಿನೀಯರಿಂಗ್ ಉಪ ವಿಭಾಗದ ಶಾಖಾಧಿಕಾರಿಗಳು ಬಿಲ್ಲಗಳನ್ನು ಪರಿಶೀಲಿಸಿ, ಎಂ.ಬಿ. ಯಲ್ಲಿ ದಾಖಲಿಸಿ ದೃಢೀಕರಿಸುವ ಕರ್ತವ್ಯವಾಗಿದ್ದು, ಅದರಂತೆ ಕಾರ್ಯನಿರ್ವಹಿಸಲಾಗಿದೆ.

ಸದರಿ ಕಾರಣ ಕೇಳುವ ನೋಟೀಸಿಗೆ ಡಾ. ಕೆ.ವಿ.ದೇವರಾಜುಲು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ ಇವರು ದಿನಾಂಕ 20.06.2015ರ ಪತ್ರದಲ್ಲಿ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸುತ್ತಾ, ಸದರಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ದಿನಾಂಕ 22.09.2009 ರಂದು ಕರ್ತವ್ಯದಿಂದ ಬಿಡುಗಡೆ ಹೊಂದಿದ್ದು, ಆರೋಪದಲ್ಲಿ ತಿಳಿಸಿರುವಂತೆ ಸೆಪ್ಟೆಂಬರ್ 2009ರ ನಂತರ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ದೊಡ್ಡ ಗುಬ್ಬಿ ಗ್ರಾಮ ಸ್ಮಶಾನದಲ್ಲಿ ನೆಡುತೋಪು ನಿರ್ಮಾಣ ಕಾಮಗಾರಿ ತಮ್ಮ ಅವಧಿಯಲ್ಲಿ ಪ್ರಾರಂಭಗೊಂಡು ಪ್ರಗತಿಯಲ್ಲಿದ್ದು, ಆದರೆ ತಮ್ಮ ವರ್ಗಾವಣೆ ನಂತರ ಸದರಿ ಕಾಮಗಾರಿಯು ಪೂರ್ಣಗೊಂಡಿರುತ್ತದೆ.

ಸದರಿ ಯೋಜನೆಯ ಅನುಷ್ಠಾನಕ್ಕಾಗಿ ರೂ.38,614/-ನ್ನು ಪಾವತಿಸಲಾಗಿದ್ದು, ಅನುಷ್ಠಾನಗೊಳಿಸುವ ಅವಧಿಯಲ್ಲಿ ತಾವು ಕಾರ್ಯನಿರ್ವಹಿಸಿರುವುದಿಲ್ಲ ಹಾಗೂ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 107 ವಿಸೇಬಿ 2008 ದಿನಾಂಕ 12.07.2010ರಂತೆ ಶ್ರೀ ಅಬೀಬ್‌ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರಿಂದ ರೂ.38,614/-ಗಳನ್ನು ಸರ್ಕಾರಕ್ಕೆ ಜಮಾ ಮಾಡಿರುವುದರಿಂದ, ಆರೋಪದಿಂದ ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ, ಇವರ ಪ್ರಸ್ತಾವನೆಯಲ್ಲಿ ಆಪಾದಿತರ ವಿರುದ್ದದ ಆರೋಪಗಳು ಮತ್ತು ಲಿಖಿತ ರಕ್ಷಣಾ ಹೇಳಿಕೆಗಳು ಇವುಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ಜಿ.ಆರ್.ಶ್ರೀರಾಮರೆಡ್ಡಿ ಮತ್ತು ಡಾ॥ ಕೆ.ವಿ.ದೇವರಾಜುಲು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಪೂರ್ವ ತಾಲ್ಲೂಕು, ಇವರುಗಳು ಪ್ರಕರಣದ ಹಣ ದುರುಪಯೋಗಕ್ಕೆ ಕಾರಣರಾಗಿರುವುದಿಲ್ಲ. ಆದುದರಿಂದ, ಸದರಿಯವರುಗಳ ವಿರುದ್ದದ ಇಲಾಖಾ ವಿಚಾರಣೆಯನ್ನು ಕೈಬಿಡಲು ಸರ್ಕಾರಕ್ಕೆ ತಿಳಿಸಿರುತ್ತಾರೆ.

2009-10ನೇ ಸಾಲಿನಲ್ಲಿ ಬೆಂಗಳೂರು ಪೂರ್ವ ತಾಲ್ಲೂಕು, ದೊಡ್ಡಗುಬ್ಬಿ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ವಹಿಸಿದ ಕಾಮಗಾರಿಗಳಲ್ಲಿ ಹಣ ದುರುಪಯೋಗ ಆಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಅಬೀಬ್ ಖಾನ್ ಇವರು ದುರುಪಯೋಗವಾದ ಮೊತ್ತ ರೂ. 38,614/-ಗಳನ್ನು ಸರ್ಕಾರಕ್ಕೆ ಜಮಾ ಮಾಡಿರುತ್ತಾರೆ. ಶ್ರೀಯುತರು ದಿನಾಂಕ 28.02.2013ರಂದು ವಯೋನಿವೃತ್ತಿ ಹೊಂದಿರುವುದರಿಂದ, ಇವರ ನಿವೃತ್ತಿ ವೇತನದ ಸೌಲಭ್ಯಗಳನ್ನು ಮಂಜೂರು ಮಾಡಲು ಅಗತ್ಯ ಕ್ರಮಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ, ಇವರಿಗೆ ತಿಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 106 ವಿಸೇಬಿ 2010 ಬೆಂಗಳೂರು ದಿನಾಂಕ: 04.03.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಜಿ.ಆರ್.ಶ್ರೀರಾಮರೆಡ್ಡಿ, ಮತ್ತು ಡಾ॥ ಕೆ.ವಿ.ದೇವರಾಜುಲು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಪೂರ್ವ ತಾಲ್ಲೂಕು, ಇವರುಗಳ ವಿರುದ್ದದ ಇಲಾಖಾ ವಿಚಾರಣೆಯಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಶ್ರೀ ಅಬೀಬ್ ಖಾನ್, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರು ದುರುಪಯೋಗವಾಗಿರುವ ಮೊತ್ತವಾದ ರೂ. 38,614/-ಗಳನ್ನು ಸರ್ಕಾರಕ್ಕೆ ಜಮಾ ಮಾಡಿರುವುದರಿಂದ ಮತ್ತು ಸದರಿಯವರು ದಿನಾಂಕ: 28.02.2013 ರಂದು ವಯೋನಿವೃತ್ತಿ ಹೊಂದಿರುವುದರಿಂದ, ಪ್ರಕರಣವು ಜರುಗಿ 4 ವರ್ಷಗಳು ಗತಿಸಿರುವುದರಿಂದ,

ಅವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ನಿಯಮಗಳಲ್ಲಿ ಅವಕಾಶವಿಲ್ಲದೆ ಇರುವುದರಿಂದ, ಸದರಿಯವರ ನಿವೃತ್ತಿ ವೇತನದ ಸೌಲಭ್ಯಗಳನ್ನು ಮಂಜೂರು ಮಾಡಲು ಅಗತ್ಯ ಕ್ರಮಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ ಇವರಿಗೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ) 4/3/16
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:-

1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ
3. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತಿ ಬೆಂಗಳೂರು ನಗರ ಇವರ ಮುಖಾಂತರ)

ಪ್ರತಿಯನ್ನು ಮಾಹಿತಿಗಾಗಿ:-

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.